ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ರಾಜ್ಯದಲ್ಲಿನ ಪ್ರವಾಸೋದ್ಯಮ ಪುನಶ್ಚೇತನ ಕುರಿತು

ಶ್ರೀ ಹೆಚ್.ಎಂ.ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-

678 (752) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೋವಿಡ್ ಕಾರಣದಿಂದಾಗಿ ಸಂಪೂರ್ಣವಾಗಿ ಕುಸಿತ ಕಂಡಿರುವ ರಾಜ್ಯದ ಪ್ರವಾಸೋದ್ಯಮವನ್ನು ಪುನಶ್ಚೇತನಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಆ) 120 ಕೋಟಿ ರೂಪಾಯಿ ವೆಚ್ಚದಲ್ಲಿ ಜೋಗ ಅಭಿವೃದ್ಧಿ ಕಾರ್ಯಕ್ರಮ ರೂಪಿಸಲು ಸರ್ಕಾರ ಅನುಮೋದನೆ ನೀಡಿದೆಯೇ; ನೀಡಿದ್ದರೆ, ಈಗಾಗಲೇ ಅಭಿವೃದ್ಧಿಯಾಗಿರುವ ಜೋಗದ ಪುನರಾಭಿವೃದ್ಧಿಗೆ ಇಷ್ಟು ಹಣ ಮೀಸಲಿಡಲು ಕಾರಣ ಏನು ;

(ಇ) ಧಾರ್ಮಿಕ ಪ್ರವಾಸೋದ್ಯಮ, ಇಕೋ ಟೂರಿಸಂ ಮತ್ತು ರಾಜ್ಯದ ಕರಾವಳಿ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಸರ್ಕಾರ ಯಾವ ಯಾವ ಕಾರ್ಯಕ್ರಮ ಹಮ್ಮಿಕೊಂಡಿದೆ ; (ವಿವರ ನೀಡುವುದು)

(ಈ) ವಿದೇಶಿ ಪ್ರವಾಸಿಗರನ್ನು ಮತ್ತೆ ಆಕರ್ಷಿಸಲು ಸರ್ಕಾರ ಪ್ರವಾಸೋದ್ಯಮ ಅಭಿವೃದ್ಧಿಗೆ ಯಾವ ಹೊಸ ಯೋಜನೆ ರೂಪಿಸಲಿದೆ ? (ವಿವರ ನೀಡುವುದು)